# <u>ಮಂಗಳೂರು ವಿಶ್ವವಿದ್ಯಾನಿಲಯ</u>

**ದಿನಾಂಕ 13.03.2026 ರಂದು ಪೂರ್ವಾಹ್ನ ಗಂಟೆ 10.30ಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟು ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2026ನೇ ಸಾಲಿನ ದ್ವಿತೀಯ ಸಾಮಾನ್ಯ ಸಭೆಯ ನಡವಳಿಗಳು.**

**ಉಪಸ್ಥಿತರು :**

| | | |
|---|---|---|
| 1. | ಪ್ರೊ. ಪಿ.ಎಲ್. ಧರ್ಮ<br>ಕುಲಪತಿಗಳು | ಅಧ್ಯಕ್ಷರು |
| 2. | ಡಾ. ಕವಿತಾ ಕೆ.ಆರ್.<br>ಜಂಟಿ ನಿರ್ದೇಶಕರು (ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು |
| 3. | ಪ್ರೊ. ಪುಟ್ಟಣ್ಣ<br>ಡೀನರು, ವಾಣಿಜ್ಯ ನಿಕಾಯ | ಸದಸ್ಯರು |
| 4. | ಡಾ. ಎಸ್.ಬಿ.ಎಂ. ಪ್ರಸನ್ನ | ಸದಸ್ಯರು (ಆನ್‌ಲೈನ್) |
| 5. | ಡಾ.ಕೆ.ಸಿ. ಮಹದೇಶ | ಸದಸ್ಯರು |
| 6. | ಪ್ರೊ. ಉದಯ ಕುಮಾರ್ ಬಿ. | ಸದಸ್ಯರು |
| 7. | ಶ್ರೀ ನಿತ್ಯಾನಂದ ವಿ. ಗಾಂವಕರ | ಸದಸ್ಯರು |
| 8. | ಶ್ರೀಮತಿ ಶೃತಿ ಶೆಟ್ಟಿ | ಸದಸ್ಯರು |
| 9. | ಶ್ರೀ ಅಲೆಕ್ಸ್ ಐವನ್ ಸಿಕ್ವೇರಾ | ಸದಸ್ಯರು |
| 10. | ಶ್ರೀ ಸುರೇಶ್ ಕುಮಾರ್ ಬಿ. ನಾವೂರು | ಸದಸ್ಯರು |
| 11. | ಶ್ರೀ ಸಿ.ಎ. ನಿತಿನ್ ಜೆ. ಶೆಟ್ಟಿ | ಸದಸ್ಯರು |
| 12. | ಶ್ರೀಮತಿ ಜೂಡಿತ್ ಮೆಂಡೋನ್ಸ | ಸದಸ್ಯರು (ಆನ್‌ಲೈನ್) |
| 13. | ಶ್ರೀ ರಘುರಾಜ್ | ಸದಸ್ಯರು |
| 14. | ಶ್ರೀ ಅಚ್ಚುತ ಗಟ್ಟಿ | ಸದಸ್ಯರು |
| 15. | ಶ್ರೀ ಮಹಮ್ಮದ್ ಸವಾದ್ | ಸದಸ್ಯರು |

| | | |
|---|---|---|
| 16. | ಶ್ರೀಮತಿ ಪುಷ್ಪಲತಾ ಹೆಚ್.ಕೆ.<br>ಪ್ರಾಂಶುಪಾಲರು ಮತ್ತು ಸಹ ನಿರ್ದೇಶಕರು,<br>ಸರ್ಕಾರಿ ಶಿಕ್ಷಕ ಶಿಕ್ಷಣ ಮಹಾವಿದ್ಯಾಲಯ,<br>**(ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಆಯುಕ್ತರ ಪರವಾಗಿ)** | ಸದಸ್ಯರು |
| 17. | ಪ್ರೊ. ಹೆಚ್. ದೇವೇಂದ್ರಪ್ಪ<br>ಕುಲಸಚಿವರು (ಪರೀಕ್ಷಾಂಗ) | ಸದಸ್ಯರು |
| 18. | ಶ್ರೀ ಪಂಚಲಿಂಗಸ್ವಾಮಿ, **ಕೆ.ಎಸ್.ಎ.ಎಸ್.,**<br>ಹಣಕಾಸು ಅಧಿಕಾರಿ (ಪ್ರಭಾರ) | ವಿಶೇಷ ಆಹ್ವಾನಿತರು |
| 19. | ಡಾ. ಗಣೇಶ್ ಸಂಜೀವ್<br>ಪ್ರಭಾರ ಕುಲಸಚಿವರು (ಆಡಳಿತ) | ಸದಸ್ಯ ಕಾರ್ಯದರ್ಶಿ |

**ಅನುಪಸ್ಥಿತರು:**

| | | |
|---|---|---|
| 1. | ತಾಂತ್ರಿಕ ಶಿಕ್ಷಣ ನಿರ್ದೇಶಕರು,<br>ಕರ್ನಾಟಕ ಸರ್ಕಾರ<br>ಬೆಂಗಳೂರು | ಸದಸ್ಯರು |
| 2. | ಡಾ. ಸಂದೇಶ್ ಕೆ.ಎಸ್<br>(ವೈದ್ಯಕೀಯ ಶಿಕ್ಷಣ ನಿರ್ದೇಶಕರ ಪರವಾಗಿ) | ಸದಸ್ಯರು |

## <u>ಪ್ರಾರಂಭಿಕ</u>

ಪ್ರಾರಂಭದಲ್ಲಿ ಕುಲಸಚಿವರು ಸಿಂಡಿಕೇಟಿನ ದ್ವಿತೀಯ ಸಾಮಾನ್ಯ ಸಭೆಗೆ ಸಭಾಧ್ಯಕ್ಷರಾದ ಮಾನ್ಯ ಕುಲಪತಿಯವರನ್ನು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸ್ವಾಗತಿಸಿದರು.

## ಪ್ರಾಸ್ತಾವಿಕ

**ಮಾನ್ಯ ಕುಲಪತಿಯವರು ಮತ್ತೊಮ್ಮೆ ಎಲ್ಲರನ್ನು ಸ್ವಾಗತಿಸಿ, ಸಭೆಯನ್ನು ಪ್ರಾರಂಭಿಸಿದರು.**

**ಈ ಕೆಳಗಿನ ವಿಷಯಗಳನ್ನು ಸಭೆಯ ಗಮನಕ್ಕೆ ತರಲಾಯಿತು.**

1. ಸ್ನಾತಕೋತ್ತರ ಸೆಮಿಸ್ಟರ್ ಪರೀಕ್ಷೆಗಳ ಫಲಿತಾಂಶವನ್ನು ಪ್ರಕಟಿಸಿರುವ ಬಗ್ಗೆ ಸಭೆಗೆ ತಿಳಿಸಲಾಯಿತು.

2. ಸೆಂಟರ್ ಫಾರ್ ಸ್ಟಡಿ ಆಫ್ ಸೋಶಿಯಲ್ ಎಕ್ಸ್‌ಕ್ಲೂಷನ್ & ಇನ್‌ಕ್ಲೂಸಿವ್ ಪಾಲಿಸಿ ಕೇಂದ್ರಕ್ಕೆ ಕೇಂದ್ರ ಸರ್ಕಾರದಿಂದ ಬಾಕಿ ಇದ್ದ 76.4 ಲಕ್ಷ ಅನುದಾನ ಬಿಡುಗಡೆಯಾಗಿದ್ದು ಸದರಿ ಅನುದಾನದಿಂದ ಸಂಶೋಧನಾ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಬಾಕಿ ಸಂಬಳವನ್ನು ಪಾವತಿಸುವುದಾಗಿ ಸಭೆಗೆ ತಿಳಿಸಲಾಯಿತು.

3. ಮಂಗಳೂರು ನಗರ ಪೋಲಿಸ್ ಆಯುಕ್ತರು ವಿದ್ಯಾರ್ಥಿಗಳಲ್ಲಿ ಮಾದಕ ದ್ರವ್ಯ ವ್ಯಸನದ ಪಿಡುಗನ್ನು ನಿವಾರಿಸುವ ನಿಟ್ಟಿನಲ್ಲಿ ಸಾಕಷ್ಟು ಕ್ರಮಗಳನ್ನು ಕೈಗೊಂಡಿರುತ್ತಾರೆ. ಸದರಿಯವರು, ವಿದ್ಯಾರ್ಥಿಗಳಲ್ಲಿ ಈ ಬಗ್ಗೆ ಜಾಗೃತಿಯನ್ನು ಮೂಡಿಸಲು ಹಾಗೂ ಸಮಾಜಕ್ಕೆ ವ್ಯಸನ ಮುಕ್ತ ಪದವಿಧರರನ್ನು ನೀಡುವ ನಿಟ್ಟಿನಲ್ಲಿ, ಪದವಿ ಪ್ರಮಾಣ ಪತ್ರಕ್ಕೆ ಅರ್ಜಿ ಸಲ್ಲಿಸುವ ಸಂಧರ್ಭದಲ್ಲಿ ವಿದ್ಯಾರ್ಥಿಗಳಿಂದ ಮಾದಕ ದ್ರವ್ಯ ಬಳಸದಿರುವ ಬಗ್ಗೆ ಘೋಷಣಾ ಪತ್ರವನ್ನು ಪಡೆಯುವಂತೆ ಸಲಹೆ ನೀಡಿರುತ್ತಾರೆ. ಈ ಬಗ್ಗೆ ಸಿಂಡಿಕೇಟು ಸಭೆಯಲ್ಲಿ ಚರ್ಚಿಸಿ ವಿದ್ಯಾರ್ಥಿಗಳಿಂದ ಘೋಷಣಾ ಪತ್ರವನ್ನು ಪಡೆಯಲು ಸಿಂಡಿಕೇಟು ನಿರ್ಣಯಿಸಿತು.

## I. ಅನುಸರಣಾ ವರದಿಯ ಅನುಮೋದನೆ

**ದಿನಾಂಕ 28.01.2026ರಂದು ನಡೆದ ಸಿಂಡಿಕೇಟಿನ 2026ನೇ ಸಾಲಿನ ಪ್ರಥಮ ಸಾಮಾನ್ಯ ಸಭೆಯ ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯ ಅನುಮೋದನೆ.**

ಕಾರ್ಯಸೂಚಿ ಸಂಖ್ಯೆ ಸಿಂಡಿಕೇಟು:ಸಾ.ಸ.1:27(2026)ಕ್ಕೆ ಸಂಬಂಧಿಸಿದಂತೆ, ಸಿಂಡಿಕೇಟು ಇದನ್ನು ಗಂಭೀರವಾಗಿ ಪರಿಗಣಿಸಿ, ಎಲ್ಲಾ ಅಧ್ಯಾಪಕರಿಗೂ ಕಡ್ಡಾಯವಾಗಿ ಪಿಹೆಚ್.ಡಿ. ಮಾರ್ಗದರ್ಶಕರಾಗುವ ಬಗ್ಗೆ ತಿಳುವಳಿಕೆ ಪತ್ರ ನೀಡಲು ತೀರ್ಮಾನಿಸಲಾಯಿತು. ಅಧ್ಯಾಪಕರ ಸಿ.ಎ.ಎಸ್. ಪದೋನ್ನತಿ ನೀಡುವ ಸಮಯದಲ್ಲಿ ಪಿಹೆಚ್.ಡಿ. ಮಾರ್ಗದರ್ಶಕತ್ವವನ್ನು ಕೂಡಾ ಪರಿಗಣಿಸಲು ಸಿಂಡಿಕೇಟಿನಲ್ಲಿ ನಿರ್ಣಯಿಸಲಾಯಿತು.

**- ಉಳಿದಂತೆ ಅನುಮೋದಿಸಲಾಯಿತು –**

## II. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.

| | |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಬ್ಬಂದಿ:ಸಾ.ಸ.2:1 (2026) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ವಿಭಾಗದಲ್ಲಿ ಸಹಾಯಕ ದೈಹಿಕ ಶಿಕ್ಷಣ ನಿರ್ದೇಶಕರಾಗಿ ಕಾರ್ಯ ನಿರ್ವಹಿಸುತ್ತಿರುವ ಡಾ.ಪ್ರಸನ್ನ ಬಿ.ಕೆ. ಇವರನ್ನು ಅಂತರ್ ವಿಶ್ವವಿದ್ಯಾನಿಲಯದ ವರ್ಗಾವಣೆಯಡಿಯಲ್ಲಿ ದಾವಣಗೆರೆ ವಿಶ್ವವಿದ್ಯಾನಿಲಯಕ್ಕೆ ವರ್ಗಾಯಿಸುವ ಕುರಿತು. |
| **ನಿರ್ಣಯ:** | ಈ ಮೊದಲೇ ವರ್ಗಾವಣೆ ಕೋರಿ ಮನವಿ ಸಲ್ಲಿಸಿರುವ ಎಫ್.ಎಂ.ಕೆ.ಎಂ.ಸಿ. ಕಾಲೇಜು, ಮಡಿಕೇರಿ ಇಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧ್ಯಾಪಕರುಗಳಾದ ಡಾ.ರಾಜೇಂದ್ರ ಆರ್., ಡಾ. ಬಿಷ್ಟಪ್ಪ ಹನುಮಂತಪ್ಪ ತಳವಾರ್, ಮೇಜರ್ ರಾಘವ, ಡಾ. ತಿಪ್ಪೇಸ್ವಾಮಿ ಇವರುಗಳನ್ನು ಮಾತ್ರ ಸಂಸ್ಥೆಯಾದ ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ವರ್ಗಾಯಿಸಲು ಮತ್ತೊಮ್ಮೆ ಸರ್ಕಾರವನ್ನು ಕೋರುವುದು ಮತ್ತು ಖಾಯಂ ಸಿಬ್ಬಂದಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಡಾ.ಪ್ರಸನ್ನ ಬಿ.ಕೆ. ಇವರನ್ನು ದಾವಣಗೆರೆ ವಿಶ್ವವಿದ್ಯಾನಿಲಯಕ್ಕೆ ವರ್ಗಾಯಿಸುವ ಬಗ್ಗೆ ಸಿಂಡಿಕೇಟು ಷರತ್ತುಬದ್ಧ ಅನುಮೋದನೆ ನೀಡಿತು. |

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.2:2 (2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಸಾಗರ ಭೂವಿಜ್ಞಾನ ವಿಭಾಗದಲ್ಲಿ ಸಹಾಯಕ ಪ್ರಾಧ್ಯಪಕರಾಗಿ ಕಾರ್ಯ ನಿರ್ವಹಿಸುತ್ತಿರುವ ಡಾ. ನಿರ್ಮಲ ಆರ್., ಇವರನ್ನು ಅಂತರ್ ವಿಶ್ವವಿದ್ಯಾನಿಲಯದ ವರ್ಗಾವಣೆಯಡಿಯಲ್ಲಿ ಮೈಸೂರು ವಿಶ್ವವಿದ್ಯಾನಿಲಯಕ್ಕೆ ವರ್ಗಾಯಿಸುವ ಕುರಿತು.

**ನಿರ್ಣಯ:** ಈ ಮೊದಲೇ ವರ್ಗಾವಣೆ ಕೋರಿ ಮನವಿ ಸಲ್ಲಿಸಿರುವ ಎಫ್.ಎಂ.ಕೆ.ಎಂ.ಸಿ. ಕಾಲೇಜು, ಮಡಿಕೇರಿ ಇಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧ್ಯಾಪಕರುಗಳಾದ ಡಾ.ರಾಜೇಂದ್ರ ಆರ್., ಡಾ. ಬಿಷ್ಟಪ್ಪ ಹನುಮಂತಪ್ಪ ತಳವಾರ್, ಮೇಜರ್ ರಾಘವ, ಡಾ. ತಿಪ್ಪೇಸ್ವಾಮಿ ಇವರುಗಳನ್ನು ಮಾತ್ರ ಸಂಸ್ಥೆಯಾದ ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ವರ್ಗಾಯಿಸಲು ಮತ್ತೊಮ್ಮೆ ಸರ್ಕಾರವನ್ನು ಕೋರುವುದು ಮತ್ತು ಖಾಯಂ ಸಿಬ್ಬಂದಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಡಾ.ನಿರ್ಮಲ ಆರ್., ಇವರನ್ನು ಮೈಸೂರು ವಿಶ್ವವಿದ್ಯಾನಿಲಯಕ್ಕೆ ವರ್ಗಾಯಿಸುವ ಬಗ್ಗೆ ಸಿಂಡಿಕೇಟು ಷರತ್ತುಬದ್ಧ ಅನುಮೋದನೆ ನೀಡಿತು.

ಕಾರ್ಯಸೂಚಿ ಸಂಖ್ಯೆ: ಸಾರ್ವತ್ರಿಕ:ಸಾ.ಸ.2:3 (2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಹಾಗೂ ಘಟಕ ಕಾಲೇಜುಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಗ್ರೂಪ್ ಡಿ ವ್ಯವಸ್ಥೆ ಒದಗಿಸುವ ಗುತ್ತಿಗೆ ಸಂಸ್ಥೆಯಾದ M/S Sree Venkateshwara Enterprises, Bangalore ಇವರ ಗುತ್ತಿಗೆ ಅವಧಿ ಮುಂದುವರಿಸುವ ಬಗ್ಗೆ.

**ನಿರ್ಣಯ:** ವಿಶ್ವವಿದ್ಯಾನಿಲಯಕ್ಕೆ ಅಗತ್ಯವಿರುವ ಹಿನ್ನೆಲೆಯಲ್ಲಿ ಹಾಲಿ ಗುತ್ತಿಗೆದಾರರ ಸೇವೆಯನ್ನೇ ಹೊಸ ಟೆಂಡರು ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ವಿಸ್ತರಿಸಲು ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.2:4 (2026)

ವಿಷಯ: ಕುಮಾರಿ ಗೀತಾ ಕೆ., ಹಿರಿಯ ಸಹಾಯಕರು, ಮಂಗಳೂರು ವಿಶ್ವವಿದ್ಯಾನಿಲಯ ಇವರನ್ನು ಕರ್ನಾಟಕ ಮಾಹಿತಿ ಆಯೋಗಕ್ಕೆ ನಿಯೋಜನೆ ಮೇರೆಗೆ ನೇಮಿಸುವ ಸರ್ಕಾರದ ಪ್ರಸ್ತಾವನೆ ಬಗ್ಗೆ.

**ನಿರ್ಣಯ:** ಕುಮಾರಿ ಗೀತಾ ಕೆ., ಇವರನ್ನು ಕರ್ನಾಟಕ ಮಾಹಿತಿ ಆಯೋಗಕ್ಕೆ ನಿಯಮಿತ ಅವಧಿಗೆ ನಿಯೋಜನೆ ಮೇರೆಗೆ ನೇಮಿಸಲು ಸಿಂಡಿಕೇಟು ಒಪ್ಪಿಗೆ ಸೂಚಿಸಿ, ಸರ್ಕಾರಕ್ಕೆ ಪತ್ರ ಬರೆಯಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಸಾ.ಸ.2:5 (2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಅಧೀನದಲ್ಲಿದ್ದ ಡಾ.ಎ.ವಿ.ಬಾಳಿಗ ಇನ್ಸ್ಟಿಟ್ಯೂಟ್ ಆಫ್ ಸೋಶಿಯಲ್ ಅಂಡ್ ರೂರಲ್ ಮ್ಯಾನೇಜ್ಮೆಂಟ್, ಹಾರಾಡಿ ವಿದ್ಯಾಸಂಸ್ಥೆಯನ್ನು ಅಧಿಕೃತವಾಗಿ ಮುಚ್ಚುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಪರೀಕ್ಷಾಂಗ:ಸಾ.ಸ.2:6 (2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ 44ನೇ ವಾರ್ಷಿಕ ಘಟಿಕೋತ್ಸವದಲ್ಲಿ ಪ್ರದಾನ ಮಾಡಲಿರುವ ಚಿನ್ನದ ಪದಕಗಳ ತಯಾರಿಕಾ ವೆಚ್ಚದ ದರಪಟ್ಟಿಗೆ ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ಚರ್ಚಿಸಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.2:7 (2026)

ವಿಷಯ: NMR ಕೇಂದ್ರದ ಪ್ರಯೋಗಾಲಯಕ್ಕೆ ಒಂದು ವರ್ಷಕ್ಕೆ ಅಗತ್ಯವಿರುವ Liquid Nitrogen ಖರೀದಿ ಪ್ರಸ್ತಾವನೆ ಬಗ್ಗೆ.

**ನಿರ್ಣಯ:** ಚರ್ಚಿಸಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಾರ್ವತ್ರಿಕ:ಸಾ.ಸ.2:8 (2026)

ವಿಷಯ: 2025-26ನೇ ಸಾಲಿನ ಮಂಗಳೂರು ವಿಶ್ವವಿದ್ಯಾನಿಲಯದ ಅಂತರ್ ವಿಶ್ವವಿದ್ಯಾನಿಲಯ ಕ್ರೀಡಾ ಚಟುವಟಿಕೆಗಳಿಗೆ ಟ್ರ್ಯಾಕ್ ಸೂಟ್‌ಗಳನ್ನು ಖರೀದಿಸುವ ಕುರಿತು. (ಲೆ.ಶೀ-1810).

**ನಿರ್ಣಯ:** ಚರ್ಚಿಸಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಆಡಳಿತ:ಸಾ.ಸ.2:9 (2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರ ಕಛೇರಿಯಲ್ಲಿರುವ DX2430 ಡುಪ್ಲೋ ಯಂತ್ರಗಳಿಗೆ ಅಗತ್ಯವಿರುವ ಮಾಸ್ಟರ್ ರೋಲ್ ಹಾಗೂ ಇಂಕ್‌ಗಳನ್ನು ಒಂದು ವರ್ಷದ ಅವಧಿಗೆ ಸರಬರಾಜು ಮಾಡುವ ಧಾರಣಾಗುತ್ತಿಗೆ ದರ ನಿಗದಿಪಡಿಸುವ ಕುರಿತು.

**ನಿರ್ಣಯ:** ಚರ್ಚಿಸಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.2:10(2026)

ವಿಷಯ: ಯುಜಿಸಿ ನಿಯಮಾವಳಿ 2018ರ ಪ್ರಕಾರ ಕೆರಿಯರ್ ಅಡ್ವಾನ್ಸ್‌ಮೆಂಟ್ ಸ್ಕೀಂನಡಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗ/ಘಟಕ ಕಾಲೇಜುಗಳ ಬೋಧಕರಿಗೆ ವೃತ್ತಿ ಪದೋನ್ನತಿ - ಆಯ್ಕೆ ಸಮಿತಿ/ಸ್ಕ್ರೀನಿಂಗ್ ಕಂ ಇವ್ಯಾಲ್ಯೂವೇಶನ್ ಸಮಿತಿ ಸಭೆಯ ಶಿಫಾರಸ್ಸುಗಳನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಚರ್ಚಿಸಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಇಡಿ:ಸಾ.ಸ.2:11 (2026)

ವಿಷಯ: ಅಭಿವೃದ್ಧಿ ಅನುದಾನದಡಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ವಿಭಾಗದಲ್ಲಿರುವ ಮಹಿಳಾ ವಿಶ್ರಾಂತಿ ಕೊಠಡಿಯ ನವೀಕರಣ ಕಾಮಗಾರಿ - ಟೆಂಡರು ಅನುಮೋದನೆ ಬಗ್ಗೆ.

**ನಿರ್ಣಯ:** ಕಾಮಗಾರಿ ಕೈಗೊಳ್ಳಲು ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಇಡಿ:ಸಾ.ಸ.2:12 (2026)

ವಿಷಯ: ಅಭಿವೃದ್ಧಿ ಅನುದಾನದಡಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಆಡಿಟೋರಿಯಂ ಕಟ್ಟಡದ ಅಗತ್ಯ ನಿರ್ಮಾಣ ಕಾಮಗಾರಿ ಮತ್ತು ಮಂಗಳೂರು ವಿಶ್ವವಿದ್ಯಾನಿಲಯದ ಉದ್ಯೋಗಸ್ಥ ಮಹಿಳೆಯರ ವಸತಿನಿಲಯದಿಂದ ಗ್ರಂಥಾಲಯದವರೆಗೆ ಒಳರಸ್ತೆಯಲ್ಲಿ ವಿದ್ಯಾರ್ಥಿಗಳು / ಸಿಬ್ಬಂದಿಗಳು ಹಾದು ಹೋಗುವ ಕಾಲು ದಾರಿ (Walk path) ನಿರ್ಮಾಣ ಕಾಮಗಾರಿ - ಪ್ಯಾಕೇಜ್ ಟೆಂಡರು ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಇಡಿ:ಸಾ.ಸ.2:13 (2026)

ವಿಷಯ: "ಅಭಿವೃದ್ಧಿ ಅನುದಾನದಡಿಯಲ್ಲಿ" ಮಂಗಳೂರು ವಿಶ್ವವಿದ್ಯಾನಿಲಯದ IQAC ಕಛೇರಿಯನ್ನು Lecture Complex ಕಟ್ಟಡಕ್ಕೆ ಸ್ಥಳಾಂತರಿಸುವ ಉದ್ದೇಶಕ್ಕಾಗಿ ಕೆಲವೊಂದು ಮಾರ್ಪಾಡು ಕಾಮಗಾರಿ - ಅಂದಾಜುಪಟ್ಟಿ ಅನುಮೋದನೆ ಬಗ್ಗೆ. ಅಂದಾಜು ಪಟ್ಟಿ ಮೊತ್ತ ರೂ.4.00 ಲಕ್ಷ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಇಡಿ:ಸಾ.ಸ.2:14(2026)

ವಿಷಯ: ಅಭಿವೃದ್ಧಿ ಅನುದಾನದಡಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ವಿಜ್ಞಾನ ಸಂಕೀರ್ಣ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಂಚೆ ಮತ್ತು ತಂತಿ ಕಚೇರಿಯನ್ನು ವಾಣಿಜ್ಯ ಕಟ್ಟಡಕ್ಕೆ ಸ್ಥಳಾಂತರಿಸಲು ಅಂಗಡಿ ಕೊಠಡಿಗಳನ್ನು ದುರಸ್ತಿಗೊಳಿಸುವ ಕಾಮಗಾರಿ - ಟೆಂಡರು ಅನುಮೋದನೆ ಬಗ್ಗೆ.

**ನಿರ್ಣಯ:** ಚರ್ಚಿಸಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಇಡಿ:ಸಾ.ಸ.2:15 (2026)

ವಿಷಯ: Re-tender for the supply of Electrical materials on Rate Contract Basis for the year 2024-25 to Mangalore University, Mangalagangothri (call-3).

**ನಿರ್ಣಯ:** ಕಾರ್ಯಸೂಚಿಯನ್ನು ಕೈಬಿಡಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.2:16 (2026)

ವಿಷಯ: IQAC, ಮಂಗಳೂರು ವಿಶ್ವವಿದ್ಯಾನಿಲಯ ಇಲ್ಲಿನ ಜನವರಿ 2026ರ ಚಟುವಟಿಕೆಯ ಮುಖ್ಯಾಂಶದ ವರದಿಯನ್ನು ಅವಗಾಹನೆಗೆ ಮಂಡಿಸುವ ಬಗ್ಗೆ.

**ನಿರ್ಣಯ:** ಡೀನರ ನೆಲೆಯಲ್ಲಿ ಸಿಂಡಿಕೇಟು ಸದಸ್ಯರಾದ ಪ್ರೊ. ಪುಟ್ಟಣ್ಣ ಇವರು ಸಿಂಡಿಕೇಟು ಸಭೆಗೆ ಐಕ್ಯೂಎಸಿ ಕಾರ್ಯಚಟುವಟಿಕೆಯ ಬಗ್ಗೆ ಮಾಹಿತಿ ನೀಡಿದರು. ಐಕ್ಯೂಎಸಿ ತಂಡದ ಕಾರ್ಯ ವೈಖರಿಯ ಬಗ್ಗೆ ಸಿಂಡಿಕೇಟು ಮೆಚ್ಚುಗೆ ವ್ಯಕ್ತಪಡಿಸಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.2:17(2026)

ವಿಷಯ: ಪದವಿ ಮಟ್ಟದ ಹೊಟೇಲ್ ಮ್ಯಾನೇಜ್‌ಮೆಂಟ್ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.

**ನಿರ್ಣಯ:** ಅಧ್ಯಯನ ಮಂಡಳಿಯ ಪುನರ್ರಚನೆಯ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.2:18(2026)

ವಿಷಯ: ಡಾ.ವಜೀದಾ ಬಾನೊ, ಸಹಾಯಕ ಪ್ರಾಧ್ಯಾಪಕರು, ಅರ್ಥಶಾಸ್ತ್ರ ವಿಭಾಗ, ಇವರಿಗೆ ಸಹಾಯಕ ಪ್ರಾಧ್ಯಾಪಕ ಹಂತ 2ಗೆ ನೀಡಿರುವ ಪದೋನ್ನತಿ ದಿನಾಂಕವನ್ನು ಪರಿಷ್ಕರಿಸುವುದಕ್ಕೆ ಸಂಬಂಧಿಸಿ ಸ್ಕ್ರೀನಿಂಗ್ ಕಂ ಇವ್ಯಾಲ್ಯೂವೇಶನ್ ಸಮಿತಿ ಸಭೆಯ ನಡವಳಿಯನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.2:19 (2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ರಸಾಯನಶಾಸ್ತ್ರ ವಿಭಾಗಕ್ಕೆ ಅಗತ್ಯವಿರುವ ರಾಸಾಯನಿಕ ಗ್ಲಾಸ್‌ವೇರ್/ಉಪಯೋಗಿ ವಸ್ತುಗಳ ಖರೀದಿ ಪ್ರಸ್ತಾವನೆಗೆ ಮಂಜೂರಾತಿ ನೀಡುವ ಬಗ್ಗೆ.

**ನಿರ್ಣಯ:** ಚರ್ಚಿಸಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು:ಸಾ.ಸ.2:20(2026)

ವಿಷಯ: ಶ್ರೀ ಅಚ್ಚುತ ಗಟ್ಟಿ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ.

**ವಿಷಯ 1 :** ಬ್ರಹ್ಮಶ್ರೀ ನಾರಾಯಣ ಗುರು ಅಧ್ಯಯನ ಪೀಠಕ್ಕೆ ಸ್ವಂತ ಕಟ್ಟಡ ನಿರ್ಮಾಣವಾಗಿರುವುದರಿಂದ ನೂತನ ಕಟ್ಟಡವು ಯಾವುದೇ ಕಾರ್ಯಚಟುವಟಿಕೆಗಳಿಗೆ ಉಪಯೋಗವಾಗದಿರುವುದರಿಂದ ಸದ್ರಿ ಕಟ್ಟಡದಲ್ಲಿ ಅಧ್ಯಯನ ಪೀಠದ ಕಚೇರಿ ಹಾಗೂ ಕಾರ್ಯಚಟುವಟಿಕೆಗಳು ನಡೆಸಲ್ಪಡುವುದರಿಂದ ಕಟ್ಟಡವನ್ನು ಸುಸ್ಥಿತಿಯಲ್ಲಿಡಲು ಅವಕಾಶ ಕಲ್ಪಿಸಿಕೊಡುವುದಕ್ಕೆ ಶೀಘ್ರವಾಗಿ ಕ್ರಮ ಕೈಗೊಳ್ಳುವ ಬಗ್ಗೆ ಪ್ರಸ್ತಾವನೆ.

**ನಿರ್ಣಯ:** ಬ್ರಹ್ಮಶ್ರೀ ನಾರಾಯಣ ಗುರು ಅಧ್ಯಯನ ಪೀಠದ ಸ್ವಂತ ಕಟ್ಟಡಕ್ಕೆ ಅಗತ್ಯವಿರುವ ಪ್ರವೇಶ ದ್ವಾರ ಹಾಗೂ ಅಗತ್ಯ ಮೂಲ ಸೌಲಭ್ಯವನ್ನು ಒದಗಿಸಿ ಪೀಠದ ಕಾರ್ಯ ಚಟುವಟಿಕೆಯನ್ನು ಹೊಸ ಕಟ್ಟಡದಲ್ಲಿ ಪ್ರಾರಂಭಿಸಲು ನಿರ್ಣಯಿಸಲಾಯಿತು.

**ವಿಷಯ 2 :** ವಿಶ್ವಮಂಗಳ ಆಂಗ್ಲ ಮಾಧ್ಯಮ ಶಾಲೆಯು ವಿಶ್ವಮಂಗಳ ಶಿಕ್ಷಣ ಸಂಸ್ಥೆ ಎಂಬ ನೋಂದಾಯಿತ ಖಾಸಗಿ ಸಂಸ್ಥೆಯಾಗಿದ್ದು, ಸದ್ರಿ ಸಂಸ್ಥೆಯು ವಿಶ್ವವಿದ್ಯಾನಿಲಯದ ಜಮೀನಿನಲ್ಲೆ ವಿಶ್ವವಿದ್ಯಾನಿಲಯದ ವತಿಯಿಂದಲೇ ಕಟ್ಟಡ ನಿರ್ಮಾಣ, ಉಚಿತ ನೀರು ಸರಬರಾಜು, ಉಚಿತ ಕ್ರೀಡಾಂಗಣದ ವ್ಯವಸ್ಥೆಯನ್ನು ಕಲ್ಪಿಸಿಕೊಡಲಾಗಿದೆ. ಸಂಸ್ಥೆಯು ರೂ.30,000 ದಿಂದ ರೂ.35,000 ತನಕ ಪ್ರತಿ ವಿದ್ಯಾರ್ಥಿಗಳಿಂದ ಪ್ರತಿ ವರ್ಷ ವಸೂಲಿ

|  |  |
|---|---|
|  | ಮಾಡಿದರೂ, ವಿಶ್ವವಿದ್ಯಾನಿಲಯಕ್ಕೆ ಯಾವುದೇ ಬಾಡಿಗೆ ನೀಡುವುದಿಲ್ಲ. ಈ ಬಗ್ಗೆ ವಿಶ್ವವಿದ್ಯಾನಿಲಯವು ಸೂಕ್ತ ಕ್ರಮ ಕೈಗೊಳ್ಳುವುದಕ್ಕೆ ಪ್ರಸ್ತಾವನೆ. |
| **ನಿರ್ಣಯ:** | ವಿಶ್ವಮಂಗಳ ಎಜ್ಯುಕೇಶನ್ ಟ್ರಸ್ಟ್ ಆಡಳಿತ ಮಂಡಳಿಯನ್ನು ಪುನರ್ರಚಿಸುವ ನಿಟ್ಟಿನಲ್ಲಿ ಕ್ರಮಕೈಗೊಳ್ಳಲು ನಿರ್ಣಯಿಸಲಾಯಿತು. |

|  |  |
|---|---|
| ಕಾರ್ಯಸೂಚಿ ಸಂಖ್ಯೆ: | ಸಿಂಡಿಕೇಟು:ಸಾ.ಸ.2:21(2026) |
| ವಿಷಯ: | ಡಾ.ಕೆ.ಸಿ. ಮಹದೇಶ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ - ಬಗ್ಗೆ. |
| ವಿಷಯ 1 : | ಮಂಗಳೂರು ವಿಶ್ವವಿದ್ಯಾನಿಲಯದ ಬಹುಪಯೋಗಿ ಕಟ್ಟಡಗಳಾದ ಅಂತರಾಷ್ಟ್ರೀಯ ಹಾಸ್ಟೆಲ್‌ನ ಪ್ರಸ್ತುತ ಪರಿಸ್ಥಿತಿಗಳು ಮತ್ತು ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳ ಅನುಕೂಲಕ್ಕೆ ಅದನ್ನು ವಿಶ್ವವಿದ್ಯಾನಿಲಯಕ್ಕೆ ಲೋಕಾರ್ಪಣೆಗೊಳಿಸಲು ಚರ್ಚಿಸಿ ನಿರ್ಣಯಿಸಲು ಕೋರಿದೆ. |
| **ನಿರ್ಣಯ:** | ಮಾನ್ಯ ಸಿಂಡಿಕೇಟು ಸದಸ್ಯರಾದ ಶ್ರೀ ಸಿ.ಎ.ನಿತಿನ್ ಜೆ.ಶೆಟ್ಟಿ ಇವರನ್ನೊಳಗೊಂಡ ಸಮಿತಿ ರಚಿಸಿ ಅಂತರಾಷ್ಟ್ರೀಯ ಹಾಸ್ಟೆಲ್‌ನ Status report ತಯಾರಿಸಿ ಕೂಡಲೆ ಎಲ್ಲಾ ಸಿಂಡಿಕೇಟು ಸದಸ್ಯರಿಗೆ ನೀಡಲು ನಿರ್ಣಯಿಸಲಾಯಿತು. ಸದರಿ ವರದಿಯೊಂದಿಗೆ ಸಿಂಡಿಕೇಟು ಸದಸ್ಯರೊನ್ನೊಳಗೊಂಡ ತಂಡದೊಂದಿಗೆ ಮಾನ್ಯ ವಿಧಾನ ಸಭಾಧ್ಯಕ್ಷರನ್ನು ಭೇಟಿಯಾಗಿ ಪರಿಹಾರ ಕಂಡುಕೊಳ್ಳುವ ಬಗ್ಗೆ ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ.ಕೆ.ಸಿ. ಮಹದೇಶ ರವರ ಸಲಹೆಯನ್ನು ಒಪ್ಪಲಾಯಿತು. |
| ವಿಷಯ 2 : | ಮಂಗಳೂರು ವಿಶ್ವವಿದ್ಯಾನಿಲಯದ ಕಾಪು, ಬೆಳಪು ಸಂಶೋಧನಾ ಕೇಂದ್ರದ ಕಟ್ಟಡಗಳ ಪ್ರಸ್ತುತ ಪರಿಸ್ಥಿತಿಗಳು ಮತ್ತು ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳ ಅನುಕೂಲಕ್ಕೆ ಅದನ್ನು ವಿಶ್ವವಿದ್ಯಾನಿಲಯಕ್ಕೆ ಲೋಕಾರ್ಪಣೆಗೊಳಿಸಲು ಚರ್ಚಿಸಿ ನಿರ್ಣಯಿಸಲು ಕೋರಿದೆ. |
| **ನಿರ್ಣಯ:** | ಈ ಬಗ್ಗೆ ವಿಸ್ತೃತವಾಗಿ ಚರ್ಚಿಸಲಾಯಿತು. ಸದರಿ ಕೇಂದ್ರದಲ್ಲಿ ಸರ್ಕಾರವು ಗಾಂಧಿ ಸಂಶೋಧನಾ ಕೇಂದ್ರವನ್ನು ಸ್ಥಾಪಿಸಲು ಆಸಕ್ತಿ ವಹಿಸಿರುವುದಾಗಿ ಹಾಗೂ ಕೇಂದ್ರ ಸರ್ಕಾರವು Marine Research Centre ಪ್ರಾರಂಭಿಸುವ ಬಗ್ಗೆಯೂ ಸಹ ಆಸಕ್ತಿ ವಹಿಸಿರುವುದನ್ನು ಸಭೆಗೆ ತಿಳಿಸಲಾಯಿತು. ಅಲ್ಲದೆ ಮಾನ್ಯ ಸಿಂಡಿಕೇಟು ಸದಸ್ಯರಾದ ಶ್ರೀ ಸಿ.ಎ.ನಿತಿನ್ ಜೆ.ಶೆಟ್ಟಿ ಇವರನ್ನೊಳಗೊಂಡ ಸಮಿತಿ ರಚಿಸಿ ಬೆಳಪು ಸಂಶೋಧನಾ ಕೇಂದ್ರದ ಬಗ್ಗೆಯೂ Status report ತಯಾರಿಸಿ ಕೂಡಲೆ ಎಲ್ಲಾ ಸಿಂಡಿಕೇಟು ಸದಸ್ಯರಿಗೆ ನೀಡಿ ಮುಂದಿನ ಕ್ರಮಕೈಗೊಳ್ಳಲು ನಿರ್ಣಯಿಸಲಾಯಿತು. . |

ವಿಷಯ 3: ಮಂಗಳೂರು ವಿಶ್ವವಿದ್ಯಾನಿಲಯದ ಇಂಜಿನಿಯರಿಂಗ್ ವಿಭಾಗದ ಕಾರ್ಯ ಚಟುವಟಿಕೆಗಳ ಬಗ್ಗೆ "ಸಮಿತಿಯನ್ನು ರಚಿಸಲಾಗಿದ್ದು" ಸಮಿತಿಯ ಅಭಿವೃದ್ಧಿಯ ಕಾರ್ಯ ಚಟುವಟಿಕೆಗಳ ಬಗ್ಗೆ ಚರ್ಚಿಸಿ ನಿರ್ಣಯಿಸಲು ಕೋರಿದೆ.

**ನಿರ್ಣಯ:** ಮುಂದಿನ ಸಭೆಗೆ ಮುಂದೂಡಲಾಯಿತು.

ವಿಷಯ 4 : ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತದಲ್ಲಿ ಆರ್ಥಿಕ ಸುಧಾರಣೆಗಳ ಭಾಗವಾಗಿ ವಿಶ್ವವಿದ್ಯಾನಿಲಯದಲ್ಲಿ ಪ್ರಥಮ ಬಾರಿಗೆ ಜಾರಿಗೆ ತಂದಿರುವ ಡಬಲ್ ಎಂಟ್ರಿ ಸಿಸ್ಟಮ್‌ನ ಬಗ್ಗೆ ಮತ್ತು ಅದರಿಂದ ಆಗಿರುವ ಆರ್ಥಿಕ ಸುಧಾರಣೆ ಬಗ್ಗೆ ಚರ್ಚಿಸಿ ನಿರ್ಣಯಿಸಲು ಕೋರಿದೆ.

**ನಿರ್ಣಯ:** ಚರ್ಚಿಸಿ ವಿವರಣೆ ನೀಡಲಾಯಿತು.

ವಿಷಯ 5 : ಮಂಗಳೂರು ವಿಶ್ವವಿದ್ಯಾನಿಲಯದ 2023-24, 2024-25 ರ ಸರ್ಕಾರದಿಂದ ವಿಶ್ವವಿದ್ಯಾನಿಲಯಕ್ಕೆ ಬಂದಿರುವ ಪಿಂಚಣಿದಾರರ ಹಣದ ಬಳಕೆಯ ಬಗ್ಗೆ ಸಮಗ್ರ ಮಾಹಿತಿಯನ್ನು ನೀಡುವುದು ಮತ್ತು ಚರ್ಚಿಸಿ ನಿರ್ಣಯಿಸಲು ಕೋರಿದೆ.

**ನಿರ್ಣಯ:** ಮಾಹಿತಿಯನ್ನು ಈ ಹಿಂದಿನ ಸಿಂಡಿಕೇಟು ಸಭೆಯಲ್ಲಿಯೇ ಒದಗಿಸಲಾಗಿರುವ ಬಗ್ಗೆ ತಿಳಿಸಿ ವಿವರ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಪಿಎಂಇಬಿ:ಸಾ.ಸ.2:22(2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಮಂಗಳ ಸಭಾಂಗಣಕ್ಕೆ 250KVA DIESEL GENERATOR ಉಪಕರಣವನ್ನು ಪಿಎಂ-ಉಷಾ ಯೋಜನೆಯ ಅನುದಾನದಿಂದ ಖರೀದಿಸುವ ಬಗ್ಗೆ ಸಿಂಡಿಕೇಟ್ ಸಭೆಗೆ ಪ್ರಸ್ತಾವನೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಪಿಎಂಇಬಿ:ಸಾ.ಸ.2:23(2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಸಾಗರ ಭೂವಿಜ್ಞಾನ ವಿಭಾಗಕ್ಕೆ Water Quality Kit ಉಪಕರಣವನ್ನು ಪಿಎಂ-ಉಷಾ ಯೋಜನೆಯ ಅನುದಾನದಿಂದ ಖರೀದಿಸುವ ಬಗ್ಗೆ ಸಿಂಡಿಕೇಟ್ ಸಭೆಗೆ ಪ್ರಸ್ತಾವನೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.2:24(2026)

ವಿಷಯ: VGST - CISEE Project, ಅನ್ವಯಿಕ ಪ್ರಾಣಿಶಾಸ್ತ್ರ ವಿಭಾಗ - ರಾಸಾಯನಿಕ/ಉಪಭೋಗ್ಯ ವಸ್ತುಗಳ ಖರೀದಿಗೆ ಅನುಮತಿ ನೀಡುವ ಬಗ್ಗೆ (VGST ಅನುದಾನ).

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.2:25(2026)

ವಿಷಯ: BRNS Research Project, CARER ಕೇಂದ್ರ - Modification of the Environmental chamber ಬಗ್ಗೆ (BRNS Grant).

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.2:26(2026)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ 04 ಘಟಕ ಕಾಲೇಜುಗಳನ್ನು ಸರ್ಕಾರದ ವ್ಯಾಪ್ತಿಗೆ ತರುವ ನಿಟ್ಟಿನಲ್ಲಿ In House Expert Committee ಸಭೆಯ ನಡವಳಿಯನ್ನು ಸರಕಾರಕ್ಕೆ ಸಲ್ಲಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ:ಸಾ.ಸ.2:27(2026)

ವಿಷಯ: IQAC, ಮಂಗಳೂರು ವಿಶ್ವವಿದ್ಯಾನಿಲಯ ಇದರ ಸ್ಥಾಪನೆ ಹಾಗೂ ಕಾರ್ಯವೈಖರಿಯ ಕರಡು ಪರಿನಿಯಮವನ್ನು ಅನುಮೋದಿಸುವ ಕುರಿತು.

**ನಿರ್ಣಯ:** ಅನುಮೋದಿಸಲಾಯಿತು.

**ಇತರೆ ವಿಷಯಗಳು:**

1) ವಿಶ್ವವಿದ್ಯಾನಿಲಯಕ್ಕೆ ಪ್ರವೇಶವಾಗುವ ಪ್ರದೇಶದಲ್ಲಿ ಹಾಗೂ ಆಡಳಿತ ಸೌಧಕ್ಕೆ ಪ್ರವೇಶವಾಗುವ ರಸ್ತೆಗಳು ಸೇರಿದಂತೆ ವಿವಿಧೆಡೆಯಿರುವ ವಿಶ್ವವಿದ್ಯಾನಿಲಯದ ಫಲಕಗಳನ್ನು ದುರಸ್ತಿಗೊಳಿಸಲು ನಿರ್ಣಯಿಸಲಾಯಿತು.

2) ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ.ಕೆ.ಸಿ. ಮಹದೇಶ ಇವರು ನ್ಯಾಕ್ ಮೌಲ್ಯಮಾಪನದಲ್ಲಿ ಉತ್ತಮ ಶ್ರೇಯಾಂಕ ಪಡೆದ ಬೇರೆ ವಿಶ್ವವಿದ್ಯಾನಿಲಯಗಳಿಗೆ ನಮ್ಮ ವಿಶ್ವವಿದ್ಯಾನಿಲಯದ ಐಕ್ಯೂಎಸಿ ತಂಡವನ್ನು ಕಳುಹಿಸಿ ಅಧ್ಯಯನ ನಡೆಸುವ ಬಗ್ಗೆ ನೀಡಿದ ಸಲಹೆಯ ಕುರಿತು ಚರ್ಚಿಸಲಾಯಿತು. ಈ ಬಗ್ಗೆ ಐಕ್ಯೂಎಸಿ ಸಂಯೋಜಕರೊಂದಿಗೆ ಸಿಂಡಿಕೇಟು ಸದಸ್ಯರಾಗಿರುವ ಡೀನರು ಚರ್ಚಿಸಿ ಅಭಿಪ್ರಾಯವನ್ನು ಪಡೆದು ಮುಂದಿನ ಕ್ರಮವಹಿಸಲು ನಿರ್ಣಯಿಸಲಾಯಿತು.

3) ಮಾನ್ಯ ಸದಸ್ಯರಾದ ಡಾ.ಕೆ.ಸಿ. ಮಹದೇಶ ಇವರ ಸಲಹೆ ಮೇರೆಗೆ ಘಟಕ ಕಾಲೇಜಿನಲ್ಲಿ ಹೋಟೇಲ್ ಮ್ಯಾನೇಜ್‌ಮೆಂಟ್ ಕೋರ್ಸನ್ನು ಪ್ರಾರಂಭಿಸುವ ಬಗ್ಗೆ ಪರಿಶೀಲಿಸಲು ನಿರ್ಣಯಿಸಲಾಯಿತು.

4) ಉಪಕುಲಸಚಿವರ ಹುದ್ದೆ ಸೇರಿದಂತೆ ಎಲ್ಲಾ ಅರ್ಹ ಸಿಬ್ಬಂದಿಗಳಿಗೆ ಮುಂಭಡ್ತಿಯನ್ನು ಶೀಘ್ರವಾಗಿ ನೀಡಲು ನಿರ್ಣಯಿಸಲಾಯಿತು.

5) ಮಾನ್ಯ ಸಿಂಡಿಕೇಟು ಸದಸ್ಯರಾದ ಡಾ.ಕೆ.ಸಿ. ಮಹದೇಶ ಮತ್ತು ಇತರ ಸದಸ್ಯರುಗಳ ಸಲಹೆ ಮೇರೆಗೆ, ವೇತನ ಹೆಚ್ಚಳ ಮಾಡದಿರುವ ತಾತ್ಕಾಲಿಕ ನೆಲೆಯಲ್ಲಿ ಸೇವೆ ಸಲ್ಲಿಸುತ್ತಿರುವ ವಾಹನ ಚಾಲಕರು, ಲ್ಯಾಬ್ ಟೆಕ್ನಿಷಿಯನ್, ತಾಂತ್ರಿಕ ಸಿಬ್ಬಂದಿಗಳಿಗೂ ವೇತನ ಹೆಚ್ಚಳ ಮಾಡುವಂತೆ ನಿರ್ಣಯಿಸಲಾಯಿತು.

6) ಸಾಮಾಜಿಕ ಜಾಲತಾಣದಲ್ಲಿ ವಿಶ್ವವಿದ್ಯಾನಿಲಯದ ವಿರುದ್ಧ ಅಪಪ್ರಚಾರ ಮಾಡುತ್ತಿರುವ ಡಾ. ಅರುಣ್ ಕುಮಾರ್ ಇವರಿಗೆ ತಿಳುವಳಿಕೆ ನೋಟೀಸು ನೀಡಲು ಸಿಂಡಿಕೇಟು ನಿರ್ಣಯಿಸಿತು. ಮುಂದಿನ ಶೈಕ್ಷಣಿಕ ವರ್ಷದಿಂದ ಸದರಿಯವರನ್ನು ಅತಿಥಿ ಉಪನ್ಯಾಸಕ ಹುದ್ದೆಗೆ ಪರಿಗಣಿಸದಿರಲು ನಿರ್ಣಯಿಸಲಾಯಿತು.

7) 44ನೇ ವಾರ್ಷಿಕ ಘಟಿಕೋತ್ಸವವನ್ನು ದಿನಾಂಕ 28.03.2026ರಂದು ನಡೆಸಲಾಗುವುದೆಂದು ಸಭೆಯ ಗಮನಕ್ಕೆ ತರಲಾಯಿತು.

8) ಮಾನ್ಯ ಸಿಂಡಿಕೇಟು ಸದಸ್ಯರಾದ ಪ್ರೊ. ಉದಯ ಕುಮಾರ್ ಬಿ. ಇವರ ಸಲಹೆಯಂತೆ, ಬಿ.ಎಡ್. ಗ್ರೇಡೇಶನ್ ಪಟ್ಟಿಯ ಪ್ರಕಟಣೆಗೆ ಸಂಬಂಧಿಸಿದಂತೆ ಅಧ್ಯಯನ ಮಂಡಳಿಯ ಅಭಿಪ್ರಾಯ ಪಡೆಯಲು ನಿರ್ಣಯಿಸಲಾಯಿತು.

**ಕುಲಸಚಿವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.**

| | |
|---|---|
| ಸಹಿ/- | ಸಹಿ/- |
| **ಕುಲಸಚಿವರು** | **ಕುಲಪತಿಯವರು** |